# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## **ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 25-03-2021 ಪ್ರಶ್ನೆ ಸಂಖ್ಯೆ : 1840 (2129)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಪುಟ್ಟಣ್ಣ (ಶಿಕ್ಷಕರ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 25-03-2021

ಉತ್ತರಿಸುವ ಸಚಿವರು: ಮಾನ್ಯ ಮುಖ್ಯಮಂತ್ರಿಗಳು

ವಿಷಯ : ಬಿ.ಬಿ.ಎಂ.ಪಿ ಶಾಲಾ ಕಾಲೇಜುಗಳ ನೌಕರರುಗಳ ಸಮಸ್ಯೆ ಬಗ್ಗೆ

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ನಡೆಯುತ್ತಿರುವ ಪ್ರಾಥಮಿಕ, ಪ್ರೌಢಶಾಲಾ ಮತ್ತು ಪದವಿ ಪೂರ್ವ ಕಾಲೇಜು ಮತ್ತು ಪದವಿ ಕಾಲೇಜುಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಆ) ಸದರಿ ಶಾಲಾ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಖಾಯಂ ಬೋಧಕ/ಬೋಧಕೇತರರ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಇ) ಸದರಿ ಶಾಲಾ ಕಾಲೇಜುಗಳಲ್ಲಿ ಹೊರಗುತ್ತಿಗೆ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ ಬೋಧಕ/ಬೋಧಕೇತರರ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಈ) ಈ ಶಾಲಾ ಕಾಲೇಜುಗಳಲ್ಲಿ ಹೊರಗುತ್ತಿಗೆ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗೆ ಪ್ರತಿ ತಿಂಗಳು ವೇತನ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ಕಾರಣ ಸಹಿತ ವಿವರ ನೀಡುವುದು)

(ಉ) ಸದರಿ ಹೊರಗುತ್ತಿಗೆ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿ ವರ್ಗದವರನ್ನು ಖಾಯಂ ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ ?